# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 941 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ನೌಕರರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಪ್ರಸ್ತುತ 64,729 ಅಂಗನವಾಡಿ ಕಾರ್ಯಕರ್ತೆಯರು ಮತ್ತು 59,627 ಅಂಗನವಾಡಿ ಸಹಾಯಕಿಯರುಗಳು ಕಾರ್ಯನಿರ್ವಹಿಸುತ್ತಿದ್ದಾರೆ. |
| ಆ. | ಅಂಗನವಾಡಿ ನೌಕರರಿಗೆ ಮಿನಿಮಮ್ ವೇಜ್ ಆಕ್ಟ್ 2021 ರನ್ವಯ ವೇತನ ನೀಡಲಾಗುತ್ತಿದೆಯೇ; ಪ್ರಸ್ತುತ ನೀಡಲಾಗುತ್ತಿರುವ ವೇತನವೆಷ್ಟು; (ಹುದ್ದೆಗಳ ವಿವರವನ್ನು ಜಿಲ್ಲಾವಾರು ಮಾಹಿತಿ ನೀಡುವುದು) | ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಸೇವೆಯು ಗೌರವಧನ ಆಧಾರಿತ ಸೇವೆಯಾಗಿರುವುದರಿಂದ ಕನಿಷ್ಠ ವೇತನ ಕಾಯ್ದೆ 2021 ರನ್ವಯ ವೇತನ ನೀಡಲು ಅವಕಾಶವಿರುವುದಿಲ್ಲ.<br><br>ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆ, ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ನೀಡಲಾಗುತ್ತಿರುವ ಮಾಸಿಕ ಗೌರವಧನ ಈ ಕೆಳಕಂಡಂತಿರುತ್ತದೆ:- |

(ರೂ. ಲಕ್ಷಗಳಲ್ಲಿ)

| ವಿವರ | ವಿಂಗಡನೆ | ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಗೌರವಧನ | ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ನೀಡುತ್ತಿರುವ ಗೌರವಧನ | ಒಟ್ಟು |
|---|---|---|---|---|
| ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 4500 | 6500 | 11000 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 6750 | 11250 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 7000 | 11500 |
| ಅಂಗನವಾಡಿ ಸಹಾಯಕಿ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 2500 | 3750 | 6250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 6500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 6750 |
| ಮಿನಿ ಅಂಗನವಾಡಿ ಕಾರ್ಯಕರ್ತೆ | 10 ವರ್ಷಕ್ಕಿಂತ ಕಡಿಮೆ ವರ್ಷ ಸೇವೆ ಸಲ್ಲಿಸಿದವರಿಗೆ | 3500 | 3750 | 7250 |
| | 10 ರಿಂದ 20 ವರ್ಷ ಸೇವೆ ಸಲ್ಲಿಸಿದವರಿಗೆ | | 4000 | 7500 |
| | 20 ಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ | | 4250 | 7750 |

ಹುದ್ದೆಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ.

| | | |
|---|---|---|
| (ಇ) | ಅಂಗನವಾಡಿ ನೌಕರರಿಗೆ ಸೇವಾ ಭದ್ರತೆಯನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ಇವರಿಗೆ ಇರುವ ಸೌಲಭ್ಯಗಳೇನು; | **ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಈ ಕೆಳಗಿನ ಸೌಲಭ್ಯಗಳನ್ನು ನೀಡಲಾಗುತ್ತಿದೆ.**<br>➢ ಎನ್.ಪಿ.ಎಸ್. ಲೈಟ್ ಯೋಜನೆಯಿಂದ ವಂಚಿತರಾಗಿ ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರಿಗೆ ಅನುಕ್ರಮವಾಗಿ ರೂ.50,000/- ಮತ್ತು ರೂ.30,000/- ಗಳ ಇಡಿಗಂಟನ್ನು ಪಾವತಿಸಲು ಆದೇಶ ಹೊರಡಿಸಲಾಗಿದೆ.<br>➢ ಸೇವೆಯಲ್ಲಿರುವಾಗಲೇ ಮೃತ ಪಟ್ಟ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಕುಟುಂಬದ ಅವಲಂಬಿತರಿಗೆ ರೂ.50,000/- ಮರಣ ಪರಿಹಾರ ನಿಧಿಯನ್ನು ನೀಡಲಾಗುತ್ತದೆ.<br>➢ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿ ಸೌಲಭ್ಯ ಪಡೆಯುವ ಫಲಾನುಭವಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ.50/- ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.50/- ಗಳು ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಗೆ ರೂ.200/- ಗಳು ಮತ್ತು ಅದೇ ರೀತಿ ಅಂಗನವಾಡಿ ಸಹಾಯಕರಿಗೆ ಫಲಾನುಭವಿಗಳ ಅರ್ಜಿಯನ್ನು ಆನ್‌ಲೈನ್‌ನಲ್ಲಿ ಅಳವಡಿಸಿದಾಗ ಒಂದು ಅರ್ಜಿಗೆ ರೂ25/-ನ್ನು ಹಾಗೂ 3 ಅರ್ಜಿಗಳನ್ನು ಅಳವಡಿಸಿದ ನಂತರ ಪ್ರತ್ಯೇಕವಾಗಿ ರೂ.25/- ಗಳು ಸೇರಿದಂತೆ ಒಟ್ಟು ರೂ.100/- ರಂತೆ ಪ್ರೋತ್ಸಾಹಧನ ನೀಡಲಾಗುವುದು.<br>➢ ಗರಿಷ್ಠ ರೂ.50000/-ಗಳವರೆಗೆ ವೈದ್ಯಕೀಯ ವೆಚ್ಚ ಮರುಪಾವತಿ<br>➢ ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೊಂದಣಿಯಾಗಿರುವ ಅಂಗನವಾಡಿ ಕಾರ್ಯಕರ್ತೆಯ ಗೌರವಧನದಲ್ಲಿ ರೂ.150 /- ಮತ್ತು ಸಹಾಯಕಿಯರಿಗೆ 84/- ರೂ.ಗಳನ್ನು ಪ್ರತಿಮಾಹೆ ಕಡಿತಗೊಳಿಸುವ ಮೊತ್ತಕ್ಕೆ ಅಷ್ಟೇ ಮೊತ್ತದ ವಂತಿಕೆಯನ್ನು ಸರ್ಕಾರ ಭರಿಸುತ್ತಿದೆ. |
| ಈ) | ಅಂಗನವಾಡಿ ನೌಕರರಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವಧನ /ವೇತನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ದಿನಾಂಕ: 08-04-2022ರ ಆದೇಶದಲ್ಲಿ 2022-23ನೇ ಸಾಲಿನಲ್ಲಿ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರ ಸೇವಾ ಹಿರಿತನದ ಮೇಲೆ 20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರಿಗೆ ರೂ.1,500/-, 10-20 ವರ್ಷ ಸೇವೆ ಸಲ್ಲಿಸಿದವರಿಗೆ ರೂ.1,250/- ಮತ್ತು 10 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿದವರಿಗೆ ರೂ.1,000/-ಗಳ ಗೌರವಧನವನ್ನು ಹೆಚ್ಚಿಸಿ ಪಾವತಿಸಲಾಗುತ್ತಿರುವುದರಿಂದ, ಪ್ರಸ್ತುತ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

**ಸಂಖ್ಯೆ:ಮಮಇ 367 ಐಸಿಡಿ 2022**

Halappa A.B

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು